**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಪರಿಶಿಷ್ಟ ಜಾತಿ (SCSP) / ಪರಿಶಿಷ್ಟ ಪಂಗಡದ ಉಪ ಯೋಜನೆಯನ್ನು (STSP) ಅನುಷ್ಠಾನಗೊಳಿಸುವ ಸಂಬಂಧ ವಿಶೇಷ ಘಟಕ ಯೋಜನೆ ಅಡಿ / ಗಿರಿಜನ ಉಪಯೋಜನೆ ಅಡಿ 2013-14 ನೇ ಸಾಲಿಗೆ ಮೊದಲನೇ ಮತ್ತು ಎರಡನೇ ತ್ರೈ ಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

---

**ಪ್ರಸ್ತಾವನೆ:**

2013-14 ನೇ ಸಾಲಿನ ಆಯವ್ಯದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಪರಿಶಿಷ್ಟ ಜಾತಿ (SCSP) / ಪರಿಶಿಷ್ಟ ಪಂಗಡದ ಉಪ ಯೋಜನೆಯನ್ನು (STSP) ಅನುಷ್ಠಾನಗೊಳಿಸುವ ಸಂಬಂಧ ವಿಶೇಷ ಘಟಕ ಯೋಜನೆ ಅಡಿ / ಗಿರಿಜನ ಉಪಯೋಜನೆ ಅಡಿ ಕೆಳಕಂಡಂತೆ ಅನುದಾನವನ್ನು ನಿಗದಿಗೊಳಿಸಲಾಗಿದೆ.

| ಕ್ರಮ ಸಂಖ್ಯೆ | ಸಂಸ್ಥೆಯ ಹೆಸರು / ಲೆಕ್ಕಶೀರ್ಷಿಕೆ | SCP ಅಡಿ ಒದಗಿಸಿರುವ ಮೊತ್ತ (ರೂ. ಲಕ್ಷಗಳಲ್ಲಿ) | TSP ಅಡಿ ಒದಗಿಸಿರುವ ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|
| 1 | ಕಿಮ್ಸ್, ಹುಬ್ಬಳ್ಳಿ<br>2210-05-105-1-04 | 200.00 | 100.00 |
| 2. | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು<br>2210-05-105-1-06 | 200.00 | 100.00 |
| 3. | ಜಯದೇವ ಹೃದ್ರೋಗ ಚಿಕಿತ್ಸಾ ಸಂಸ್ಥೆ, ಬೆಂಗಳೂರು<br>2210-05-105-1-12 | 250.00 | 50.00 |
| 4. | ಇಂದಿರಾಗಾಂಧಿ ಶಿಶು ಆರೋಗ್ಯ ಸಂಸ್ಥೆ, ಬೆಂಗಳೂರು<br>2210-05-105-1-20 | 75.00 | 25.00 |
| 5. | ಹೊಸ ವೈದ್ಯಕೀಯ ಕಾಲೇಜುಗಳು (ಮಂಡ್ಯ, ಹಾಸನ, ಶಿವಮೊಗ್ಗ, ಬೆಳಗಾಂ, ಬೀದರ್ ಮತ್ತು ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳು)<br>1) 2210-05-105-1-40 | 220.00 | 550.00 |
| 6. | ಕರ್ನಾಟಕ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ, ಧಾರವಾಡ<br>2210-05-105-1-46 | 75.00 | 25.00 |

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ
333
ದಿನಾಂಕ 25/11/13

VGC-2

2013-14 ನೇ ಸಾಲಿನಲ್ಲಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ ಅಡಿ ಒದಗಿಸಲಾಗಿರುವ ಅನುದಾನಕ್ಕೆ ಸಂಬಂಧಿಸಿದಂತೆ ಸಲ್ಲಿಸಲಾಗಿದ್ದ ಕ್ರಿಯಾ ಯೋಜನೆಯನ್ನು ದಿನಾಂಕ 24.08.2013 ರ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ಅನುಮೋದಿಸಲಾಗಿದ್ದು, ಅದರಂತೆ, ವೈದ್ಯಕೀಯ ಶಿಕ್ಷಣ ಇಲಾಖೆಯ ಸರ್ಕಾರಿ ಸ್ವಾಯತ್ತ ಸಂಸ್ಥೆಗಳಿಗೆ ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿಗೆ ಸದರಿ ಯೋಜನೆಗಳಡಿ ಕೆಳಕಂಡಂತೆ ಅನುದಾನವನ್ನು ಹಂಚಿಕೆ ಮಾಡಲಾಗಿದೆ.

(ರೂ. ಕೋಟಿಗಳಲ್ಲಿ)

| ಕ್ರಮ ಸಂಖ್ಯೆ | ಅನುಮೋದನೆಯಾದ ಕ್ರಿಯಾ ಯೋಜನೆ ಕಾರ್ಯಕ್ರಮ ಹಾಗೂ ಮೊತ್ತ | STP ಉಪ ಯೋಜನೆ ಅಡಿ ಹಂಚಿಕೆಯಾದ ಮೊತ್ತ | TSP ಉಪ ಯೋಜನೆ ಅಡಿ ಹಂಚಿಕೆಯಾದ ಮೊತ್ತ |
|---|---|---|---|
| 1. | ಜನತಾ ಆರೋಗ್ಯ ನಿಧಿ | 3.00 | 1.00 |
| 2. | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ | 2.00 | 1.00 |
| 3. | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು. | 2.00 | 1.00 |
| 4. | ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆ, ಬೆಂಗಳೂರು | 2.50 | 0.50 |
| 5. | ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು. | 0.75 | 0.25 |
| | **ಹೊಸ ವೈದ್ಯಕೀಯ ಕಲೇಜುಗಳು** | | |
| | 1) ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ | 3.66 | 1.73 |
| | 2) ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ. | 3.66 | 1.73 |
| | 3) ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ | 3.66 | 1.73 |
| | 4) ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ | 3.66 | 1.73 |
| | 5) ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್. | 3.66 | 1.73 |
| | 6) ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು. | 3.70 | 1.73 |
| 7. | ಕರ್ನಾಟಕ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ, ಧಾರವಾಡ | 0.75 | 0.25 |
| 8. | ಕರ್ನಾಟಕ ಮಧುಮೇಹ ಸಂಸ್ಥೆ, ಬೆಂಗಳೂರು | 0.50 | 0.25 |
| 9. | ಎಸ್.ಡಿ.ಎಸ್. ಕ್ಷಯ ರೋಗ ಸಂಸ್ಥೆ ಮತ್ತು ರಾಜೀವ್‌ಗಾಂಧಿ ಎದೆ ರೋಗಗಳ ಸಂಶೋಧನಾ ಕೇಂದ್ರ, ಬೆಂಗಳೂರು | 2.00 | 1.00 |
| 10. | **ಹೊಸ ವೈದ್ಯಕೀಯ ಕಲೇಜುಗಳು (ನಿರ್ಮಾಣ)** | | |
| | 1) ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ | 2.33 | 0.91 |
| | 2) ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ. | 2.33 | 0.91 |
| | 3) ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ | 2.33 | 0.91 |

| | | | |
|---|---|---|---|
| | 4) ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ | 2.33 | 0.91 |
| | 5) ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್. | 2.33 | 0.91 |
| | 6) ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು. | 2.35 | 0.95 |
| 11. | ಗಾಯಾಳು ಮತ್ತು ಆಕಸ್ಮಿಕ ಶುಶ್ರೂಷಾ ಘಟಕ | 2.00 | 1.00 |
| 12. | ಚಾಲ್ತಿಯಲ್ಲಿರುವ ವೈದ್ಯಕೀಯ ಕಾಲೇಜುಗಳಿಗೆ ಅಧಿಕ ಸೌಲಭ್ಯ | | |
| | 1) ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು. | 2.55 | 1.50 |
| | 2) ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು. | 2.55 | 1.50 |
| | 3) ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ | 2.55 | 1.50 |
| | 4) ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ | 2.55 | 1.50 |
| | | 61.88 | 28.13 |

ಸುತ್ತೋಲೆ ಸಂಖ್ಯೆ:ಆಇ 17 ಜಿಎಇ 2011, ದಿನಾಂಕ 20.04.2011 ರಲ್ಲಿ ಆರ್ಥಿಕ ಇಲಾಖೆಯು ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಅಡಿ ಒದಗಿಸಲಾಗಿರುವ ಅನುದಾನವನ್ನು ಬಳಕೆ ಮಾಡುವ ಸಂಬಂಧ ಕೆಳಕಂಡಂತೆ ಸ್ಪಷ್ಟೀಕರಣ ನೀಡಿರುತ್ತದೆ.

"Some departments have indicated difficulty in utilizing SCP and TSP funds for beneficiary oriented schemes or for infrastructure meant exclusively for SC and ST persons in view of nature of the department's activities and development mandate. In such cases, the funds may be used for creation of public assets and infrastructure for all communities including SC and ST communities."

2013-14 ನೇ ಸಾಲಿನಲ್ಲಿ ಸದರಿ ಯೋಜನೆಗಳಡಿ ಮೇಲ್ಕಂಡಂತೆ ಹಂಚಿಕೆ ಮಾಡಲಾಗಿರುವ ಅನುದಾನದ ಪೈಕಿ ಪ್ರಸಕ್ತ ಸಾಲಿನ ಮೊದಲ ಮತ್ತು ಎರಡನೇ ಕಂತಿನ ಅನುದಾನವನ್ನು ಒಟ್ಟಾರೆಯಾಗಿ ಬಿಡುಗಡೆಗೊಳಿಸಲು ನಿರ್ಧರಿಸಲಾಗಿದೆ.

ಪ್ರಸ್ತಾವನೆಯನ್ನು ಸಂಬಂಧಿತ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿಗೆ 2013-14 ನೇ ಸಾಲಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉಪ ಯೋಜನೆಯ ಅನುಷ್ಠಾನಕ್ಕಾಗಿ ವಿಶೇಷ ಘಟಕ ಯೋಜನೆ ಅಡಿ ರೂ.30.84 ಕೋಟಿಗಳನ್ನು ಹಾಗೂ ಗಿರಿಜನ ಉಪ ಯೋಜನೆ ಅಡಿ ರೂ.14.065 ಕೋಟಿಗಳನ್ನು 2013-14 ನೇ ಸಾಲಿನ ದಿನಾಂಕ 01.04.2013 ರಿಂದ 30.09.2013 ರ ಅವಧಿಗೆ ಮೊದಲನೇ ಹಾಗೂ ಎರಡನೇ ಕಂತಿನ ಅನುದಾನವನ್ನಾಗಿ ಕೆಳಕಂಡಂತೆ ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 102 ಎಂಎಂಇ 2013, ಬೆಂಗಳೂರು ದಿನಾಂಕ 19-11-2013</u>

ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿಗೆ 2013-14 ನೇ ಸಾಲಿಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ

ಉಪ ಯೋಜನೆಯ ಅನುಷ್ಠಾನಕ್ಕಾಗಿ ವಿಶೇಷ ಘಟಕ ಯೋಜನೆ ಅಡಿ ರೂ.3084.00 (ಮೂರು ಸಾವಿರದ ಎಂಬತ್ತ ನಾಲ್ಕು ಲಕ್ಷಗಳನ್ನು) ಹಾಗೂ ಗಿರಿಜನ ಉಪ ಯೋಜನೆ ಅಡಿ ರೂ.1406.50 ( ಒಂದು ಸಾವಿರದ ನಾಲ್ಕು ನೂರ ಆರು ಸಾವಿರ ಲಕ್ಷಗಳು ಮತ್ತು ಐವತ್ತು ಸಾವಿರ ರೂಪಾಯಿಗಳು ಮಾತ್ರ) 2013–14 ನೇ ಸಾಲಿನ ದಿನಾಂಕ 01.04.2013 ರಿಂದ 30.09.2013 ರ ಅವಧಿಗೆ ಮೊದಲನೇ ಹಾಗೂ ಎರಡನೇ ಕಂತಿನ ಅನುದಾನವನ್ನಾಗಿ ಕೆಳಕಂಡಂತೆ ಬಿಡುಗಡೆ ಮಾಡಿ ಆದೇಶಿಸಿದೆ.

(ರೂ. ಲಕ್ಷಗಳಲ್ಲಿ)

| ಕ್ರಮ ಸಂಖ್ಯೆ | ಸ್ವಾಯತ್ತ ಸಂಸ್ಥೆಗಳ ಹೆಸರು / ಲೆಕ್ಕಶೀರ್ಷಿಕೆ | STP ಉಪ ಯೋಜನೆ ಅಡಿ ಹಂಚಿಕೆಯಾದ ಮೊತ್ತ | TSP ಉಪ ಯೋಜನೆ ಅಡಿ ಹಂಚಿಕೆಯಾದ ಮೊತ್ತ |
|---|---|---|---|
| 1. | ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ 2210-05-105-1-04-422/423 | 100.00 | 50.00 |
| 3. | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು. 2210-05-105-1-06-422/423 | 100.00 | 50.00 |
| 4. | ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆ, ಬೆಂಗಳೂು 2210-05-105-1-12-422/423 | 125.00 | 25.00 |
| 5. | ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು. 2210-05-105-1-20-422/423 | 37.50 | 12.50 |
| 6. | ಹೊಸ ವೈದ್ಯಕೀಯ ಕಾಲೇಜುಗಳು 2210-05-105-1-40-422/423 | | |
| | 1) ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ 2210-05-105-1-40-422/423 | 3.66 | 1.73 |
| | 2) ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ 2210-05-105-1-40-422/423 | 3.66 | 1.73 |
| | 3) ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ 2210-05-105-1-40-422/423 | 3.66 | 1.73 |
| | 4) ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್. 2210-05-105-1-40-422/423 | 3.66 | 1.73 |
| | 5) ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ 2210-05-105-1-40-422/423 | 3.66 | 1.73 |
| | 6) ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು. 2210-05-105-1-40-422/423 | 3.70 | 1.73 |

<u>ಮೇಲ್ಕಾಣಿಸಿದ ಅನುದಾನವನ್ನು ಈ ಕೆಳಕಂಡ ಕಾರ್ಯಕ್ರಮಗಳಿಗಾಗಿ ವೆಚ್ಚ ಮಾಡತಕ್ಕದ್ದು.</u>

1) ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಪ್ರತಿ ವರ್ಷವು, ಪ್ರಥಮ ವರ್ಷ, ದ್ವಿತೀಯ ವರ್ಷ, ತೃತೀಯ ವರ್ಷ, ನಾಲ್ಕನೇ ವರ್ಷ ಮತ್ತು ಐದನೇ ವರ್ಷದ ಎಂಬಿಬಿಎಸ್ ನಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅತ್ಯಧಿಕ ಅಂಕ ಪಡೆದಿರುವ 10ಜನ ವಿದ್ಯಾರ್ಥಿಗಳಿಗೆ (ಪರಿಶಿಷ್ಟಜಾತಿ-07 ಜನ + ಪರಿಶಿಷ್ಟ ಪಂಗಡ-03 ಜನ) ಮತ್ತು ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜುಗಳಲ್ಲಿನ ಅತ್ಯಧಿಕ ಅಂಕ ಪಡೆದಿರುವ 07 ಜನ ಪರಿಶಿಷ್ಟ ಜಾತಿ /03 ಜನ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೂ ರೂ.25,000/-ಗಳ ಪ್ರೋತ್ಸಾಹಧನವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸತಕ್ಕದ್ದು ಮತ್ತು ಕಾಲೇಜಿನ ವಾರ್ಷಿಕೋತ್ಸವ ದಿನದಂದು ಗೌರವಿಸುವುದು, ಪ್ರತಿ ವಿದ್ಯಾರ್ಥಿಯ ಹೆಸರನ್ನು ಹಾಗೂ ಪಡೆದ ಅಂಕಗಳನ್ನು, ಬಹುಮಾನವನ್ನು ಸಂಸ್ಥೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು.

2) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ರಾಜ್ಯ, ರಾಷ್ಟ್ರೀಯ ಹಾಗೂ ಅಂತರ್‌ರಾಷ್ಟ್ರೀಯ ಸಮ್ಮೇಳನಗಳಲ್ಲಿ ಭಾಗವಹಿಸಿ, Paper presentation ಮಾಡುವ ಸಂಬಂಧ ತಗಲುವ ಸಂಪೂರ್ಣ ವೆಚ್ಚವನ್ನು ಭರಿಸುವುದು.

3) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಹೊರ ಮತ್ತು ಒಳರೋಗಿಗಳ ಎಲ್ಲಾ ರಹದ ಸಂಪೂರ್ಣ ಚಿಕಿತ್ಸಾ ವೆಚ್ಚವನ್ನು **(angiogram, open heart surgery, angiopiasty, PTMC, pacemakers, device closure/ballonvalvotmy, ICU/medical management, chemotherapy/drugs, dialysis, biochemistry tests, CT Scan, MRI Scan etc.)** ಭರಿಸುವುದು. ಈ ಸೌಲಭ್ಯಗಳನ್ನು ಪಡೆಯುವ ಅವಕಾಶವಿರುವುದುದನ್ನು ಎಲ್ಲಾ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೋಗಿಗಳಿಗೆ ತಿಳಿಯಪಡಿಸಲು ಆಸ್ಪತ್ರೆಯ ಗೋಡೆಗಳ ಮೇಲೆ ದಪ್ಪ ಅಕ್ಷರಗಳಲ್ಲಿ ಬರೆಯಿಸಿ ಅರಿವು ಮೂಡಿಸುವುದು.

4) ಕಾಲೇಜುಗಳ ವಸತಿ ವಿದ್ಯಾರ್ಥಿ ನಿಲಯಗಳ ನಿರ್ಮಾಣ ವೆಚ್ಚದಲ್ಲಿ ಶೇಕಡ 23(18+5) ವೆಚ್ಚವನ್ನು ಸದರಿ ಯೋಜನೆಯಡಿ ಭರಿಸುವುದು

ಎಲ್ಲಾ ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳು ಮತ್ತು ಆಸ್ಪತ್ರೆಗಳು ಮೇಲ್ಕಂಡಂತೆ ಬಿಡುಗಡೆಗೊಳಿಸಲಾದ ಅನುದಾನಕ್ಕೆ ಕೆಳಕಂಡ ಕ್ರಮಗಳನ್ನು ಕೈಗೊಂಡು ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(1) ಮೇಲ್ಕಂಡ ಎಲ್ಲಾ ಸಂಸ್ಥೆಗಳು ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗೆ ಸಂಬಂಧಿಸಿದಂತೆ ವಿವರವಾದ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಇದನ್ನು ಸದರಿ ಸಂಸ್ಥೆಯ ಆರ್ಥಿಕ ಸಮಿತಿಯ ಮುಂದೆ ಮಂಡಿಸಿ ಈ ಆದೇಶ ಹೊರಡಿಸಿದ ದಿನಾಂಕದಿಂದ 30ದಿನಗಳ ಒಳಗಾಗಿ ಅನುಮೋದನೆಯನ್ನು ಪಡೆಯತಕ್ಕದ್ದು. ನಂತರ ಈ ವಿಷಯವನ್ನು ಆಡಳಿತ ಮಂಡಳಿಯ ಮುಂದೆ ಮಂಡಿಸಿ ಘಟನೋತ್ತರ ಅನುಮೋದನೆಯನ್ನು ಪಡೆಯತಕ್ಕದ್ದು. ಈ ಕ್ರಿಯಾ ಯೋಜನೆಯನ್ನು ಆರ್ಥಿಕ ಸಮಿತಿಯ ಅನುಮೋದನೆಯಾದ ನಂತರ ಕೂಡಲೇ ಸರ್ಕಾರಕ್ಕೆ ಕಳುಹಿಸುವುದು. ಹಾಗೂ ಕ್ರಿಯಾ ಯೋಜನೆಯನ್ನು ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು.

(2) ವಾರ್ಷಿಕ ಭೌತಿಕ ಗುರಿ ಪೈಕಿ ಪ್ರತಿ ತಿಂಗಳು ಸಾಧಿಸಿದ ಭೌತಿಕ ಸಾಧನೆಯನ್ನು ಸರ್ಕಾರಕ್ಕೆ ಎಂಪಿಐಸಿ ಸಭೆಯಲ್ಲಿ ಸಲ್ಲಿಸತಕ್ಕದ್ದು.

(3) ಅನುಷ್ಠಾನ ಮಾಡುವ ಕಾರ್ಯಕ್ರಮಗಳ ಪೈಕಿ ಎಷ್ಟು ಕಾರ್ಯಕ್ರಮಗಳು ನೇರವಾಗಿ ಫಲಾನುಭವಿಗಳಿಗೆ ಪ್ರಯೋಜನವಾಗುತ್ತದೆ ಎಂಬುದರ ಬಗ್ಗೆ ಸಂಕ್ಷಿಪ್ತ ವರದಿ ಮತ್ತು ಇತರೆ ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(4) ಸ್ವಾಯತ್ತ ಸಂಸ್ಥೆಗಳು ಸಾಧಿಸಿದ ಪ್ರಗತಿ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ ಸಭೆಗೆ ಮತ್ತು ಕರ್ನಾಟಕ ಅನುಸೂಚಿತ ಜಾತಿ/ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಸಭೆಗೆ ಮತ್ತು ಕರ್ನಾಟಕ ಅನುಸೂಚಿತ ಜಾತಿ/ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಸಭೆಗೆ ಸಹ ಒದಗಿಸಬೇಕೆಂದು ತಿಳಿಸಿದರು.

(5) ಎಸ್‌ಸಿಪಿ/ಟಿಎಸ್‌ಪಿ ಯೋಜನೆಗಳಡಿ ಕಾರ್ಯಕ್ರಮವಾರು ಆರ್ಥಿಕ ಮತ್ತು ಭೌತಿಕ ಪ್ರಗತಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು

(6) ಫಲಾನುಭವಿಗಳ ಹೆಸರು ಮತ್ತು ವಿಳಾಸಗಳು ಮತ್ತು ಅವರ ಮತದಾರರ ಗುರುತಿನ ಚೀಟಿ/ಪಡಿತರ ಚೀಟಿ ಸಂಖ್ಯೆಯನ್ನು ಸಂಸ್ಥೆಯ ವೆಬ್‌ಸೈಟಿನಲ್ಲಿ ಪ್ರಕಟಿಸತಕ್ಕದ್ದು ಮತ್ತು ಸರ್ಕಾರದ ವಾರ್ಷಿಕ ವರದಿಯಲ್ಲಿ ಪಡೆದಿರುವ ಫಲಾನುಭವದ ವಿವರಗಳನ್ನು ಪ್ರಕಟಿಸತಕ್ಕದ್ದು.

ಮೇಲ್ಕಾಣಿಸಿದ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಎಲ್ಲಾ ಒಳರೋಗಿಗಳ ಮಾಹಿತಿಯನ್ನು ಕ್ರೋಢೀಕರಿಸುವ ಸಂಬಂಧ ಭಾವಚಿತ್ರವನ್ನು, ಜಾತಿ ಪ್ರಮಾಣ ಪತ್ರವನ್ನು ಹಾಗೂ ಸಂಬಂಧಿತ ವಿವರಗಳನ್ನು ಆಯಾ ಸಂಸ್ಥೆಗಳು ಪ್ರತ್ಯೇಕ ವಹಿಗಳಲ್ಲಿ ಸಂಗ್ರಹಿಸತಕ್ಕದ್ದು ಮತ್ತು ತ್ರೈಮಾಸಿಕ ವೆಚ್ಚದ ವಿವರಗಳನ್ನು ಸರ್ಕಾರದ ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಈ ಯೋಜನೆಯಲ್ಲಿ ಹಣದ ದುರುಪಯೋಗವಾದರೆ ಇದಕ್ಕೆ ನೇರವಾಗಿ ಸಂಸ್ಥೆಯ ನಿರ್ದೇಶಕರೇ ಹೊಣೆಗಾರರಾಗಿರುತ್ತಾರೆ.

2012–13ನೇ ಸಾಲಿನಲ್ಲಿ ಸದರಿ ಯೋಜನೆಗಳಡಿ ಬಿಡುಗಡೆಗೊಳಿಸಲಾದ ಅನುದಾನಕ್ಕೆ ಆಯಾ ಸ್ವಾಯತ್ತ ಸಂಸ್ಥೆಗಳು ಶೇಕಡ 90ರಷ್ಟು ಖರ್ಚು ಮಾಡಿದ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಕೂಡಲೇ ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ಎಲ್ಲಾ ಸಂಸ್ಥೆಯ ನಿರ್ದೇಶಕರು ಈ ಹಣವನ್ನು ಬಳಸಿದ ಬಗ್ಗೆ Non-Embezellement ಪ್ರಮಾಣ ಪತ್ರ ಮತ್ತು Non-Duplication ಪ್ರಮಾಣ ಪತ್ರ ಸಲ್ಲಿಸುವುದು. ಅದೇ ರೀತಿ ಪ್ರಸಕ್ತ ಸಾಲಿನಲ್ಲಿ ಬಿಡುಗಡೆಗೊಳಿಸಲಾಗಿರುವ ಅನುದಾನಕ್ಕೂ ಸಹ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ, ಭವಿಷ್ಯದ ಅನುದಾನದ ಬೇಡಿಕೆಯನ್ನು ಪರಿಗಣಿಸಲಾಗುವುದಿಲ್ಲ.

– ಈ ವೆಚ್ಚವನ್ನು 2013–14 ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 2210-05-105-1-04-422/423, 2210-05-105-1-06-422/423, 2210-05-105-1-12-422/423, 2210-05-105-1-12-422/423, 2210-05-105-1-40-422/423ರ ಅಡಿಯಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳನ್ನು ಹಾಗೂ ಮಾಡಲಾಗುವ ಖರೀದಿಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು, 2000 ರ ಪ್ರಕಾರ ಮಾಡತಕ್ಕದ್ದು.

1958 ಕರ್ನಾಟಕ ಆರ್ಥಿಕ ಸಂಹಿತಯ 161 ನೇ ಅನುಚ್ಛೇದದಡಿ ಯಾವ ಉದ್ದೇಶಕ್ಕಾಗಿ ಮೇಲ್ಕಂಡ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದು. ನಿಗಧಿತ ನಮೂನೆಯಲ್ಲಿ ಬಲಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಮಹಾಲೇಖಪಾಲರಿಗೆ ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು. ಇಷೂವರೆವಿಗೆ ಬಿಡುಗಡೆ ಮಾಡಲಾದ ಬಳಕೆ ಪ್ರಮಾಣ ಪತ್ರ ಹಾಗೂ ಕಾಮಗಾರಿಯ ಪ್ರಗತಿಯ ವರದಿಯನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅನುದಾನದ ಭವಿಷ್ಯ ಬೇಡಿಕೆಯನ್ನು ಪರಿಗಣಿಸಲಾಗುವುದಿಲ್ಲ. ಸದರಿ ಸಂಹಿತಯ 342 (ii)- (x) ನೇ ಅನುಚ್ಛೇದದಡಿ ಹೊಂದಾಣಿಕೆ (ರಿಕನ್ಸಿಲಿಯೇಷನ್) ಪ್ರಮಾಣ ಪತ್ರವನ್ನು ಮಹಾಲೇಖಪಾಲಕರ ಕಛೇರಿಯಿಂದ ಪಡೆದು ಮೂರು ತಿಂಗಳ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದು.

ತತ್ಸಂಬಂಧಿತ ಅನುದಾನದ ಬಿಲ್ಲುಗಳಿಗೆ ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ(ವೈದ್ಯಕೀಯ ಶಿಕ್ಷಣ) ಇವರನ್ನು ಮೇಲು ರುಜು ಮಾಡಲು ಅಧಿಕೃತಗೊಳಿಸಲಾಗಿದೆ.

ಸಂಬಂಧಿಸಿದ ಸಂಸ್ಥೆಯ ನಿರ್ದೇಶಕರು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಡ್ರಾ ಮಾಡುವ ಬಿಲ್ಲುಗಳಿಗೆ ಸಕ್ಷಮ ಪ್ರಾಧಿಕಾರದ ಮೇಲು ರುಜು ಪಡೆದು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇಲ್ಲಿ ಸಲ್ಲಿಸತಕ್ಕದ್ದು.

ಸಂಬಂಧಿತ ಸಂಸ್ಥೆಗಳ ಮುಖ್ಯಸ್ಥರು ಈ ಯೋಜನೆಗಳಡಿ ಕೈಗೊಳ್ಳುವ ಕಾಮಗಾರಿಗಳ ಹಾಗೂ ಖರೀದಿಗಳ ಬಿಲ್ಲುಗಳ ಮೊತ್ತವನ್ನು ನೇರವಾಗಿ ಸಂಬಂಧಿಸಿದವರಿಗೆ ಕ್ರಾಸ್ಡ್ ಚೆಕ್ ಮುಖಾಂತರ ಪಾವತಿಸತಕ್ಕದ್ದು ಹಾಗೂ ಶಾಸನಬದ್ಧ ಕಳಿಕೆಗಳಾದ ಕೆ.ಎಸ್.ಟಿ. ಸಿ.ಎಸ್.ಟಿ., ಹಾಗೂ ಇತ್ಯಾದಿ ಕಳಿಕೆಗಳನ್ನು ನೇರವಾಗಿ ಪಾವತಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಆಇ 1 ಟಿಎಫ್‌ಪಿ 2013 ದಿನಾಂಕ 10.05.2013 ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿತವಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಆರ್. ನಾಗಭೂಷಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ಮಹಾಲೇಖಪಾಲರು (ಲೆಕ್ಕಪತ್ರ/ಲೆಕ್ಕಪರಿಶೋಧನೆ 1 ಮತ್ತು 2), ಕರ್ನಾಟಕ, ಬೆಂಗಳೂರು–ಸರ್ಕಾರದ ಪ್ರಧಾನ -ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
3. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
4. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು
5. ನಿರ್ದೇಶಕರು ಮತ್ತು ಡೀನ್, ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು
6. ನಿರ್ದೇಶಕರು, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು
7. ನಿರ್ದೇಶಕರು, ಜಯದೇವ ಹೃದ್ರೋಗ ವಿಜ್ಞಾನ ಹಾಗೂ ಸಂಶೋಧನಾಸಂಸ್ಥೆ, ಬೆಂಗಳೂರು
8. ನಿರ್ದೇಶಕರು, ಎಸ್‌ಡಿಎಸ್ ರಾಜೀವ್ ಗಾಂಧಿ ಎದೆ ರೋಗಗಳ ಆಸ್ಪತ್ರೆ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು
9. ನಿರ್ದೇಶಕರು, ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು
10. ನಿರ್ದೇಶಕರು, ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ
11. ನಿರ್ದೇಶಕರು, ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು
12. ನಿರ್ದೇಶಕರು, ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬಳ್ಳಾರಿ
13. ನಿರ್ದೇಶಕರು, ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು–584102.

14. ನಿರ್ದೇಶಕರು, ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ
15. ನಿರ್ದೇಶಕರು, ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ
16. ನಿರ್ದೇಶಕರು, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ
17. ನಿರ್ದೇಶಕರು, ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ
18. ನಿರ್ದೇಶಕರು, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್
19. ನಿರ್ದೇಶಕರು, ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆ, ಧಾರವಾಡ
20. ಆಂತರಿಕ ಆಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
21. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
22. ಖಜಾನಾ ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ಬೆಂಗಳೂರು
23. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-5 ಮತ್ತು 6) ವಿಧಾನಸೌಧ, ಬೆಂಗಳೂರು
24. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ವೈದ್ಯಕೀಯ ಶಿಕ್ಷಣ), ಬೆಂಗಳೂರು
3. ಸರ್ಕಾರದ ಉಪ ಕಾರ್ಯದರ್ಶಿಗಳ ಪತ್ರಾಂಕಿತ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ವೈದ್ಯಕೀಯ ಶಿಕ್ಷಣ), ಬೆಂಗಳೂರು